ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ.ಚಂದ್ರೇಗೌಡ : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ. "

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ – IV)

(II) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2004

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) : (ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವರು) :– ಮಾನ್ಯ ಅಧ್ಯಕ್ಷರೆ, " 2004ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2004ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಪಾಟೀಲ್ (ಸಾಸನೂರು) : ಮಾನ್ಯ ಅಧ್ಯಕ್ಷರೆ, " 2004ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ – V)

ಗೊಂದಲ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ : ರಾಮದಾಸ್ ಅವರೇ, ಒಂದು ಸಣ್ಣ ಬಿಲ್ ಇದೆ, ಒಂದೇ ನಿಮಿಷ ಮಂಡನೆ ಮಾಡುತ್ತೇನೆ.

ಶ್ರೀ ಎ. ರಾಮದಾಸ್ : ಆಗಲೇ ಮಾನ್ಯ ಸಚಿವರು ಮಸೂದೆಯನ್ನು ಮಂಡನೆ ಮಾಡುತ್ತೇನೆಂದರು, ಅದಕ್ಕೆ ಅವಕಾಶ ಇದೆ; ನಾಳೆ ತಾವು ಮಂಡನೆ ಮಾಡಿ.

ಶ್ರೀ ಹೆಚ್.ಸಿ. ಶ್ರೀಕಂಠಯ್ಯ : ಒಂದೇ ನಿಮಿಷ, ಅದರೊಳಗೆ ದೊಡ್ಡ ವಿಚಾರ ಏನೂ ಇಲ್ಲ. ಒಂದೇ ನಿಮಿಷದಲ್ಲಿ ಹೇಳುತ್ತೇನೆ.

(III) ಕರ್ನಾಟಕ ಸಾರ್ವಜನಿಕ ಅವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ)(ತಿದ್ದುಪಡಿ) ವಿಧೇಯಕ, 2003

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, " 2003ನೇ ಸಾಲಿನ ಕರ್ನಾಟಕ ಸಾರ್ವಜನಿಕ ಅವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2003ರ ಕರ್ನಾಟಕ ಸಾರ್ವಜನಿಕ ಅವರಣಗಳ (ಅಪ್ರಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೇ, 2003ರ ಕರ್ನಾಟಕ ಸಾರ್ವಜನಿಕ ಅವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ-VI)

ಈ) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕ, 2004

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) :- ಮಾನ್ಯ ಅಧ್ಯಕ್ಷರೇ, 2004ನೇ ಸಾಲಿನ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಡಿ.ಬಿ.ಚಂದ್ರೇಗೌಡ : ಈ ಮಸೂದೆ ಈ ಮೊದಲು ವಿಧಾನ ಮಂಡಲದಲ್ಲಿ ಅಂಗೀಕಾರವಾಗಿ ಕೇಂದ್ರಕ್ಕೆ ಹೋಗಿತ್ತು. ಆದರೆ ಆ ಮಸೂದೆ ಕೆಲವೊಂದು technical reason ನಿಂದಾಗಿ ಕೇಂದ್ರದಿಂದ ವಾಪಸ್ ಬಂದಿದೆ.

ಶ್ರೀ ಜಗದೀಶ್ ಶೆಟ್ಟರ್ : ಆ technical reason ಏನು ?

ಶ್ರೀ ಡಿ.ಬಿ.ಚಂದ್ರೇಗೌಡ : ಕೇಂದ್ರ ಸರ್ಕಾರದಲ್ಲಿ ಏನಾಗಿದೆ ಎಂದರೆ, ವಿಧಾನ ಮಂಡಲದಲ್ಲಿ ನಾವು ಮಸೂದೆಯನ್ನು ಅನುಮೋದನೆ ಮಾಡಿದ್ದರೂ ಕೂಡ ಹಣಕಾಸು ಕಂಪೆನಿ ವ್ಯವಹಾರಗಳ ಮಂತ್ರಾಲಯವು ಕೆಲವೊಂದು ಹೊಸ ತಿದ್ದುಪಡಿಯನ್ನು ಮಾಡಲು ಸೂಚನೆ ನೀಡಿದೆ. ಅದನ್ನು ಅಳವಡಿಸಿ ಮಸೂದೆಯನ್ನು ತಿದ್ದುಪಡಿ ಮಾಡಿ, ಪುನಃ ಅಂಗೀಕರಿಸಲು ಕೇಂದ್ರಕ್ಕೆ ವಾಪಸ್ ಕಳುಹಿಸಿಕೊಡಬೇಕಾಗಿದೆ. ಆದುದರಿಂದ ದಯವಿಟ್ಟು ಸಭೆಯು ಈ ತಿದ್ದುಪಡಿ ಮಸೂದೆಗೆ ಒಪ್ಪಿಗೆ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ. 2004ನೇ ಸಾಲಿನ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 22ರವರೆಗೆ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ " ಖ ಂಡ 2ರಿಂದ 22ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 22ರವರೆಗೆ ಎರಡೂ ಸೇರಿದಂತ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.